ಇ) ಬೀದರ್‌ನಲ್ಲಿರುವ ರಕ್ಷಣಾ ಮಂತ್ರಾಲಯದ ವಿಮಾನ ನಿಲ್ದಾಣದಲ್ಲಿ ನಾಗರೀಕ ವಿಮಾನಯಾನ ಸೇವೆ ಪ್ರಾರಂಭಿಸಲು ರಕ್ಷಣಾ ಮಂತ್ರಾಲಯದಿಂದ ತಾತ್ಪೂರ್ತಿಕ ಅನುಮತಿ ದೊರತಿದೆ. ಇದಕ್ಕಾಗಿ ಹೊಸ ಟರ್ಮಿನಲ್ ಕಟ್ಟಡವನ್ನು ನಿರ್ಮಿಸಲಾಗಿದೆ. ಈ ವಿಮಾನ ನಿಲ್ದಾಣವು ಹೈದರಾಬಾದ್ ರಾಜೀವ್ ಗಾಂಧಿ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ 150 ಕಿ.ಮೀ. ವ್ಯಾಪ್ತಿಯಲ್ಲಿ ಬರುವುದರಿಂದ, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಅನುಮೋದನೆಯನ್ನು ನೀಡಿರುವುದಿಲ್ಲ. ಈ ಬಗ್ಗೆ ಹೈದರಾಬಾದ್ ರಾಜೀವ್ ಗಾಂಧಿ ವಿಮಾನ ನಿಲ್ದಾಣದ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಕೇಂದ್ರ ಸರ್ಕಾರದೊಂದಿಗೆ ಪತ್ರವ್ಯವಹಾರ ಮಾಡಲಾಗುತ್ತಿದೆ.

ಶಾಸಕರಿಗೆ ಪ್ರದೇಶಾಭಿವೃದ್ಧಿ ಯೋಜನೆ ಅನುದಾನ ಬಿಡುಗಡೆ

166 (1067) ಶ್ರೀ ಪಾಟೀಲ್ ಬಿ.ಸಿ. (ಹಿರೇಕೆರೂರು): ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಈವರೆಗೂ ಶಾಸಕರಿಗೆ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು;

ಆ) 2010-11ನೇ ಸಾಲಿಗೆ ಸಂಬಂಧಿಸಿದಂತೆ ಬಿಡುಗಡೆ ಮಾಡಿದ ಅನುದಾನವೆಷ್ಟು;

ಇ) ಪ್ರತಿಯೊಬ್ಬ ಶಾಸಕರಿಗೆ ನಿಗದಿಗೊಳಿಸಿದ ಅನುದಾನ ಎಷ್ಟು; ಮುಂದೆ ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು?

ಡಾ: ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು):

ಅ) ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧ ಯೋಜನೆಯ ಆರಂಭದಿಂದ ಬಿಡುಗಡೆಯಾಗಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ:

(ರೂ. ಕೋಟಿಗಳಲ್ಲಿ)

ವರ್ಷ	ಆಯವ್ಯಯದಲ್ಲಿ ಒದಗಿಸಿದ ಅನುದಾನ	ಬಿಡುಗಡೆಯಾದ ಅನುದಾನ
2001–02	75.00	75.00
2002–03	31.00	31.00
2003–04	ರಾಜ್ಯದಲ್ಲಿ ತಲೆದೋರಿದ ಬರಗಾಲದ ಪ್ರಯುಕ್ತ ಈ ಯೋಜನೆಯನ್ನು ಅನುಷ್ಠಾನಗೊಳಿಸಿರಲಿಲ್ಲ.	
2004–05		
2005–06	150.00	150.00
2006–07	300.00	300.00
2007–08	300.00	183.25
2008–09	200.00	150.00
2009–10	460.50	460.50

ಆ) 2010–11ರಲ್ಲಿ ಪ್ರತಿ ಶಾಸಕರಿಗೆ ತಲಾ ರೂ. 1.00 ಕೋಟಿಯಂತೆ 300.00 ಕೋಟಿಗಳನ್ನು ಮತ್ತು 2009–10ನೇ ಸಾಲಿನ ಕೊನೆಯ ಕಂತಿನ ಅನುದಾನವನ್ನು ದಿನಾಂಕ: 31–03–2010ರ ಒಳಗಾಗಿ ಡಿ.ಸಿ. ಬಿಲ್ಲಿನ ಮೇಲೆ ಡ್ರಾ ಮಾಡಲು ಸಾಧ್ಯವಾಗದ ಜಿಲ್ಲಾಧಿಕಾರಿಗಳಿಗೆ ರೂ. 99.20 ಕೋಟಿಗಳನ್ನು ಅಂದರೆ ಒಟ್ಟು ರೂ. 399.20 ಕೋಟಿಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ.

ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವುದು

167 (1132) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಪ್ರವಾಸೋದ್ಯಮ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸುವ ರಾಜ್ಯದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ? (ವಿವರ ನೀಡುವುದು)